ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 678 (752)

ಮಾನ್ಯ ಸದಸ್ಯರ ಹೆಸರು : ಶ್ರೀ ಹೆಚ್.ಎಂ.ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)

ವಿಷಯ : ರಾಜ್ಯದಲ್ಲಿನ ಪ್ರವಾಸೋದ್ಯಮ ಪುನಶ್ಚೇತನ ಕುರಿತು.

ಉತ್ತರಿಸುವ ದಿನಾಂಕ : 25-09-2020

ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೋವಿಡ್ ಕಾರಣದಿಂದ ಸಂಪೂರ್ಣವಾಗಿ ಕುಸಿತ ಕಂಡಿರುವ ರಾಜ್ಯದ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;	ರಾಜ್ಯದ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸಲು ಅಗತ್ಯವಾಗಿರುವ ಪ್ರವಾಸಿ ಉತ್ತೇಜನ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲು ನೂತನ ಪ್ರವಾಸೋದ್ಯಮ ನೀತಿ 2020-25 ಅನ್ನು ಜಾರಿಗೊಳಿಸಲಾಗುತ್ತಿದೆ. 'ನೋಡು ಬಾ ನಮ್ಮೂರ' ಘೋಷ ವಾಕ್ಯದಡಿ ಸ್ಥಳೀಯ ಪ್ರೇಕ್ಷಣೀಯ ಸ್ಥಳಗಳಿಗೆ ಪ್ರವಾಸಿಗರನ್ನು ಆಕರ್ಷಿಸಲು ಕ್ರಮ ವಹಿಸಿದ್ದು, ಇದಲ್ಲದೆ, ಪ್ರಚಾರ ಮತ್ತು ಉತ್ತೇಜನ ಕಾರ್ಯಕ್ರಮದ ಮೂಲಕ ರಾಜ್ಯದ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸಲು ಅಗತ್ಯ ಕ್ರಮ ವಹಿಸಲಾಗುತ್ತದೆ.
ಆ)	120 ಕೋಟಿ ರೂಪಾಯಿ ವೆಚ್ಚದಲ್ಲಿ ಜೋಗ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲು ಸರ್ಕಾರ ಅನುಮೋದನೆ ನೀಡಿದೆಯೇ; ನೀಡಿದ್ದರೆ, ಈಗಾಗಲೇ ಅಭಿವೃದ್ಧಿಯಾಗಿರುವ ಜೋಗದ ಪುನರಾಭಿವೃದ್ಧಿಗೆ ಇಷ್ಟು ಹಣ ಮೀಸಲಿಡಲು ಕಾರಣ ಏನು ;	ಹೌದು. ಶಿವಮೊಗ್ಗ ಜಿಲ್ಲೆಯ ವಿಶ್ವವಿಖ್ಯಾತ ಜೋಗ ಜಲಪಾತವು ವಿಶ್ವ ವಿಖ್ಯಾತ ಪ್ರವಾಸಿ ತಾಣವಾಗಿರುವುದರಿಂದ ಹಾಗೂ ಇಲ್ಲಿಗೆ ಭೇಟಿ ನೀಡುತ್ತಿರುವ ಪ್ರವಾಸಿಗರ ಸಂಖ್ಯೆಯು ಇತ್ತೀಚಿನ ದಿನಗಳಲ್ಲಿ ತೀವ್ರಗತಿಯಲ್ಲಿ ಹೆಚ್ಚಾಗುತ್ತಿರುವುದರಿಂದ, ಭೇಟಿ ನೀಡುತ್ತಿರುವ ಪ್ರವಾಸಿಗರ ಅನುಕೂಲತೆಗಾಗಿ ಜೋಗ ಜಲಪಾತ ಪ್ರದೇಶದಲ್ಲಿ ಪ್ರವಾಸಿಗರಿಗೆ ವಿಶ್ವ ದರ್ಜೆಯ ಪ್ರವಾಸಿ ಮೂಲಸೌಕರ್ಯಗಳನ್ನು ಕಲ್ಪಿಸುವ ಅಗತ್ಯತೆಯನ್ನು ಪರಿಶೀಲಿಸಿ, ಹೆಚ್ಚುವರಿ ಪ್ರವಾಸಿ ಸೌಲಭ್ಯಗಳನ್ನು ರೂ.120.00 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲು ತಾತ್ವಿಕ ಅನುಮೋದನೆ ನೀಡಲಾಗಿದೆ.
ಇ)	ಧಾರ್ಮಿಕ ಪ್ರವಾಸೋದ್ಯಮ, ಇಕೋ ಟೂರಿಸಂ ಮತ್ತು ರಾಜ್ಯದ ಕರಾವಳಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮ ಹಮ್ಮಿಕೊಂಡಿದೆ; (ವಿವರ ನೀಡುವುದು)	ಧಾರ್ಮಿಕ ಪ್ರವಾಸೋದ್ಯಮ, ಇಕೋ ಟೂರಿಸಂ ಮತ್ತು ಕರಾವಳಿ ಪ್ರವಾಸಿ ತಾಣಗಳು ಒಳಗೊಂಡಂತೆ ರಾಜ್ಯದಲ್ಲಿನ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಇಲಾಖೆಯಿಂದ ಸದರಿ ಪ್ರವಾಸಿ ತಾಣಗಳಲ್ಲಿನ ಅಗತ್ಯತೆ ಹಾಗೂ ಅನುದಾನದ ಲಭ್ಯತೆಗೆ ಅನುಗುಣವಾಗಿ ಪ್ರವಾಸಿ ಮೂಲಭೂತ ಸೌಕರ್ಯಗಳಾದ ಯಾತ್ರಿ ನಿವಾಸ, ಡಾರ್ಮಿಟರಿ, ಕೂಡುರಸ್ತೆಗಳ ಅಭಿವೃದ್ಧಿ, ಕುಡಿಯುವ ನೀರು, ಶೌಚಾಲಯ, ಮುಂತಾದ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.
ಈ)	ವಿದೇಶಿ ಪ್ರವಾಸಿಗರನ್ನು ಮತ್ತೆ ಆಕರ್ಷಿಸಲು ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ಯಾವ ಹೊಸ ಯೋಜನೆ ರೂಪಿಸಲಿದೆ? (ವಿವರ ನೀಡುವುದು)	ರಾಜ್ಯಕ್ಕೆ ವಿದೇಶಿ ಪ್ರವಾಸಿಗರನ್ನು ಮತ್ತೆ ಆಕರ್ಷಿಸಲು ರಾಜ್ಯದ ಪ್ರಮುಖ ಪ್ರವಾಸಿ ತಾಣಗಳ ಬಗ್ಗೆ ಹೆಚ್ಚಿನ ರೀತಿಯಲ್ಲಿ ಪ್ರವಾಸೋದ್ಯಮ ಉತ್ತೇಜನ ಮತ್ತು ಪ್ರಚಾರವನ್ನು ನೀಡಲು ಹಾಗೂ ಕೋವಿಡ್-19 ಸುಧಾರಣೆಯ ನಂತರ ಕರ್ನಾಟಕ ಇಂಟರ್‌ನ್ಯಾಷನಲ್ ಟ್ರಾವೆಲ್ ಎಕ್ಸ್‌ಪೋ ಆಯೋಜಿಸುವ ಮೂಲಕ ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಉದ್ದೇಶಿಸಲಾಗಿದೆ.

ಟಿಓಆರ್ 199 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.